ರಾಜ್ಯದಲ್ಲಿ ಹಾನಿಗೊಳಗಾದ ರಸ್ತೆಗಳ ದುರಸ್ತಿ ಕುರಿತು

3083 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ಮೂರು ತಿಂಗಳುಗಳಿಂದ ಬೀಳುತ್ತಿರುವ ಮಳೆಯಿಂದಾಗಿ ಹಾನಿಗೊಳಗಾದ ಮುಖ್ಯ ರಸ್ತೆಗಳ ಸಂಖ್ಯೆ ಎಷ್ಟು?

ಆ) ದುರಸ್ತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು?

ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕಿನಲ್ಲಿ ರಸ್ತೆಗಳು ಹಾನಿಗೆ ಒಳಗಾಗಿದೆ?

ಈ) ಈ ರಸ್ತೆಗಳ ದುರಸ್ತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮವು ಯಾವುವು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಇತ್ತೀಚಿನ ಅತಿವೃಷ್ಟಿಯಿಂದ ಪ್ರಸ್ತುತ ವರ್ಷದಲ್ಲಿ ರಾಜ್ಯದ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ 1508 ರಸ್ತೆಗಳು ಹಾನಿಗೊಳಗಾಗಿದೆ.

ಆ) ಈ ರಸ್ತೆಗಳ ಅತಿ ತುರ್ತು ಕಾಮಗಾರಿಗಳನ್ನು ವಾರ್ಷಿಕ ನಿರ್ವಹಣೆಯಡಿ ಕೈಗೆತ್ತಿಕೊಂಡು ಸಾಧ್ಯವಾದಷ್ಟು ಮಟ್ಟಿಗೆ ಸುಸ್ಥಿತಿಯಲ್ಲಿಡಲು ಹಾಗೂ ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೆಳಕಂಡ ತಾಲ್ಲೂಕುಗಳಲ್ಲಿ ರಸ್ತೆಗಳು ಹಾನಿಗೆ ಒಳಗಾಗಿದೆ.

1. ಮಾಗಡಿ 2. ರಾಮನಗರ 3. ನೆಲಮಂಗಲ 4. ಹೊಸಕೋಟೆ 5. ಕನಕಪುರ 6. ಚನ್ನಪಟ್ಟಣ 7. ದೇವನಹಳ್ಳಿ. 8. ದೊಡ್ಡಬಳ್ಳಾಪುರ

ಈ) ಈ ರಸ್ತೆಗಳ ದುರಸ್ತಿಗೆ ಯೋಜನೇತರ ಅನುದಾನದಲ್ಲಿ ದುರಸ್ತಿಯನ್ನು ಕೈಗೊಳ್ಳಲಾಗುತ್ತಿದೆ.

ಶಿವಗಂಗೆ ಕ್ಷೇತ್ರ ಪ್ರವಾಸಿಗರ ತಾಣವಾಗಿ ಅಭಿವೃದ್ಧಿ

3095 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲ ತಾಲ್ಲೂಕು ಸೋಂಪುರ ಹೋಬಳಿ ಶಿವಗಂಗೆ ಕ್ಷೇತ್ರದಲ್ಲಿ ಪ್ರವಾಸಿಗರಿಗೆ ಯಾವುದೇ ಅನುಕೂಲ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಪ್ರವಾಸಿಗರ ತಾಣವನ್ನಾಗಿ ಅಭಿವೃದ್ಧಿಗೊಳಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ?

ಶ್ರೀ ಆರ್. ರೋಷನ್ ಬೇಗ್ (ಪ್ರವಾಸೋದ್ಯಮ ಮತ್ತು ಹಜ್ ಸಚಿವರು) :

ಅ) ಹೌದು.

ಆ) ಭೇಟಿ ನೀಡುತ್ತಿರುವ ಪ್ರವಾಸಿಗರ ಯಾತ್ರಿಕರ ಸಂಖ್ಯೆಯನ್ನು ಮನಗಂಡು ಈ ಸ್ಥಳಕ್ಕೆ ಪ್ರವಾಸಿ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಮಲೆನಾಡು ಪ್ರದೇಶದ ಅರಣ್ಯ ವ್ಯಾಪ್ತಿ ಬಗ್ಗೆ

3096 - ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ''

ಅ) *ರಾಜ್ಯದ ಪಶ್ಚಿಮಘಟ್ಟ ಪ್ರದೇಶ ಹಾಗೂ ಮಲೆನಾಡು ಪ್ರದೇಶದಲ್ಲಿರುವ ಅರಣ್ಯ ಪ್ರದೇಶದ ವ್ಯಾಪ್ತಿ ಎಷ್ಟು?*

ಆ) *ಈ ಪ್ರದೇಶದಲ್ಲಿ ಇತ್ತೀಚೆಗೆ ಕಾಡುಗಳು ಬರಿದಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಬಂದಿದ್ದಲ್ಲಿ ಸರ್ಕಾರದ ಮಾಹಿತಿಯಂತೆ ಒಟ್ಟು ಎಷ್ಟು? ಪ್ರದೇಶದಲ್ಲಿ ಕಾಡುಗಳು ಬರಿದಾಗಿವೆ?*

ಈ) *ಇದನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳೇನು?*

ಶ್ರೀ ಕೆ.ಎಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಸುಮಾರು 17.9 ಲಕ್ಷ ಹೆಕ್ಟೇರುಗಳು

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಅರಣ್ಯ ಅಭಿವೃದ್ಧಿಗೆ ಸಾಗರೋತ್ತರ ಅಭಿವೃದ್ಧಿ ನಿಗಮ ನೀಡಿದ ನೆರವು

3097 - ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪಶ್ಚಿಮ ಘಟ್ಟದ ಅರಣ್ಯ ಅಭಿವೃದ್ಧಿಗೆ ಸಾಗರೋತ್ತರ ಅಭಿವೃದ್ಧಿ ನಿಗಮ ನೀಡಿದ್ದ ನೆರವು ಸಮರ್ಪಕವಾಗಿ ಬಳಕೆಯಾಗದಿರುವುದು ನಿಜವೇ?*

ಆ) *ಈ ಬಗ್ಗೆ ವಿವರವಾಗಿ ತನಿಖೆ ನಡೆಸುವಂತೆ ಕೇಂದ್ರದ ಮಹಾಲೇಖಪಾಲರ ವರದಿ ತಿಳಿಸಿರುವುದು ನಿಜವೇ?*